**ಕರ್ನಾಟಕ ಸರ್ಕಾರ**

ಸಂಖ್ಯೆ: ಆಕುಕ 89 ಆರ್‌ಜಿಯು 2017

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ 03-05-2017.

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
(ವೈದ್ಯಕೀಯ ಶಿಕ್ಷಣ)
ಬಹುಮಹಡಿ ಕಟ್ಟಡ, ಬೆಂಗಳೂರು.

**ಇವರಿಗೆ:**

ನಿರ್ದೇಶಕರು,
ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ,
ಆನಂದರಾವ್ ವೃತ್ತ,
ಬೆಂಗಳೂರು-560009.

**ಮಾನ್ಯರೆ,**

ವಿಷಯ: **ರಾಜ್ಯದ ಖಾಸಗಿ ಹಾಗೂ ಡೀಮ್ಡ್ ವಿಶ್ವವಿದ್ಯಾಲಯಗಳ ಎನ್.ಆರ್.ಐ/ಆಡಳಿತ ಮಂಡಳಿ ಕೋಟಾದ 25% ಸೀಟುಗಳಿಗೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಂದ ಬ್ಯಾಂಕ್ ಗ್ಯಾರಂಟಿ ಪಡೆಯುವ ಬಗ್ಗೆ.**

@@@@@

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, Executive Secretary, COMED-K & Secretary, CODEUNIK ಇವರು ದಿನಾಂಕ: 18-04-2017 ರಂದು ಸರ್ಕಾರಕ್ಕೆ ಬರೆದ ಪತ್ರಗಳ ಹಿನ್ನೆಲೆಯಲ್ಲಿ ಪರಿಶೀಲಿಸಲಾಗಿದೆ. ಅದರನ್ವಯ 2017-18 ನೇ ಸಾಲಿನ ಸ್ನಾತಕೋತ್ತರ ವೈದ್ಯಕೀಯ & ದಂತ ವೈದ್ಯಕೀಯ ಕೋರ್ಸುಗಳಿಗೆ ಸಂಬಂಧಿಸಿದಂತೆ ಖಾಸಗಿ ಹಾಗೂ ಡೀಮ್ಡ್ ವಿಶ್ವವಿದ್ಯಾಲಯ ಕಾಲೇಜುಗಳ ಎನ್.ಆರ್.ಐ / ಆಡಳಿತ ಮಂಡಳಿ ಕೋಟಾದ 25% ಸೀಟುಗಳಿಗೆ ಪ್ರವೇಶಾತಿ ಪಡೆಯುವ ಅಭ್ಯರ್ಥಿಗಳಿಂದ ಮೊದಲನೇ ವರ್ಷದ ಶುಲ್ಕವನ್ನು ಪ್ರವೇಶಾತಿ ಸಂದರ್ಭದಲ್ಲಿ ಸಂಗ್ರಹಿಸುವಂತೆ ಹಾಗೂ ಉಳಿದಂತೆ ಸ್ನಾತಕೋತ್ತರ ಪದವಿ ಅಭ್ಯರ್ಥಿಗಳಿಂದ 02 ವರ್ಷಗಳ ಶುಲ್ಕ ಮತ್ತು ಡಿಪ್ಲೊಮಾ ಅಭ್ಯರ್ಥಿಗಳಿಂದ ಉಳಿದ 01 ವರ್ಷದ ಶುಲ್ಕಕ್ಕೆ ಸಂಬಂಧಿಸಿದಂತೆ ಆಯಾಯಾ ಸಂಸ್ಥೆಗಳ ಹೆಸರಿನಲ್ಲಿಯೇ ಬ್ಯಾಂಕ್ ಗ್ಯಾರಂಟಿ ಪಡೆಯಲು ಕ್ರಮವಹಿಸುವಂತೆ ಹಾಗೂ ಈ ಬಗ್ಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್ ನಲ್ಲಿ ಪ್ರಚುರಪಡಿಸುವಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಸೂಚಿಸಲು ಸರ್ಕಾರದ ಅನುಮತಿ ನೀಡಲಾಗಿದೆಯೆಂದು ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ನಿಮ್ಮ ನಂಬುಗೆಯ,

**(ಎಂ.ಬಿ. ಧೋತ್ರೆ)**
ಸರ್ಕಾರದ ಅಧೀನ ಕಾರ್ಯದರ್ಶಿ-2,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
(ವೈದ್ಯಕೀಯ ಶಿಕ್ಷಣ)

3/5/17

03.05.17